ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡಾಪಟ್ಟುಗಳಿಗೆ ನೀಡುವ ಸೌಲಭ್ಯಗಳ ಬಗ್ಗೆ

ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :-

671 (742) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಕ್ರೀಡೆಗಳಲ್ಲಿ ಪದಕಗಳನ್ನು ಗೆದ್ದಿರುವ ಕ್ರೀಡಾಪಟುಗಳಿಗೆ ರಾಜ್ಯ ಸರ್ಕಾರದಿಂದ ನೀಡಿರುವ ಸೌಲಭ್ಯ ಹಾಗೂ ನಗದು ಬಹುಮಾನಗಳ ವಿವರ ನೀಡುವುದು;

(ಆ) ಈ ಕ್ರೀಡಾಪಟುಗಳಿಗೆ ಅವರ ವಿದ್ಯಾರ್ಹತೆಗೆ ಅನುಗುಣವಾಗಿ ಸರ್ಕಾರದಲ್ಲಿ ಉದ್ಯೋಗ ಕಲ್ಪಿಸಿಕೊಡಲಾಗುತ್ತದೆಯೇ ;

(ಇ) ಯಾವ ಯಾವ ಕ್ರೀಡಾಪಟುಗಳಿಗೆ ಬಿ.ಡಿ.ಎ. ಅಥವಾ ಇನ್ನಿತರ ಸಂಸ್ಥೆಗಳಿಂದ ನಿವೇಶನ ನೀಡಲಾಗಿದೆ ? (ವಿವರ ನೀಡುವುದು)